314

ಸ್ ೧೮೯೬—97ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 24.

ಮೃತಪಟ್ಟ ಶ್ರೀನಿವಾಸರಾಘವಾಚಾರ್ಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಮೈಸೂರು ದೇವರಾಜ ಮೊಹಲಾದಲ್ಲಿರುವ A. ಕೃಷ್ಣಯ್ಯಂಗಾರ್ರು, ಮೃತಪಟ್ಟ ಸದರೀ ಶ್ರೀನಿವಾಸರಾಘವಾಚಾರ್ಯರಿಗೆ ಮಗನು ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರ್ ದೇವರಾಜ ಮೊಹಲಾ ಸ್ಥಳವ A. ಕೃಷ್ಣಯ್ಯಂಗಾರ್ರು, ಶ್ರೀರಂಗದ ವಾಸಸ್ಥರಾಗಿ ಮೃತಪಟ್ಟ ಶ್ರೀನಿವಾಸರಾಘವಾಚಾರ್ಯರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ A. ಕೃಷ್ಣಯ್ಯಂಗಾರ್ರ ಅರ್ಜಿಯನ್ನು ಸ್ ೧೮೯೬ನೇ ಇಸವಿ ಸೆಪ್ಟಂಬರ್ ತಿಂಗಳ ತಾರೀಖು 5ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶ್ರೀನಿವಾಸರಾಘವಾಚಾರ್ಯರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬—97ನೇ ಇಸವಿ ಮಿ|| ಅರ್ಜೀ ನಂಬರ್ 25.

ಮೃತಪಟ್ಟ ಕೃಷ್ಣಶಿಂಗರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಬೆಂಗಳೂರು ಜೋರೀಪೇಟೆ ಕೃಷ್ಣಶಿಂಗರ ಬೀದಿಯಲ್ಲಿರುವ ಸುಬ್ಬಾಬಾಯಿಯು, ಮೃತಪಟ್ಟ ಸದರೀ ಕೃಷ್ಣಶಿಂಗರಿಗೆ ತಾಯಿ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ಸುಬ್ಬಾಬಾಯಿಯು, ಚನ್ನಪಟ್ಟಣ ವಾಸಸ್ಥರಾಗಿ ಮೃತಪಟ್ಟ ಕೃಷ್ಣಶಿಂಗರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸುಬ್ಬಾಬಾಯಿಯ ಅರ್ಜಿಯನ್ನು 1896ನೇ ಇಸವಿ ಸೆಪ್ಟಂಬರ್ ತಿಂಗಳ ತಾರೀಖು 5ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೃಷ್ಣಶಿಂಗರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1896ನೇ ಇಸವಿ ಆಗಸ್ಟ್ ತಿಂಗಳ 1ನೇ ತಾರೀಖಿನಲ್ಲಿ ಕೋರ್ಟ್ ಮೊಹರ್‌ನಿಗೆ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸ್ ೧೮೯೫—96ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 421.

ಮೃತಪಟ್ಟ ದುರ್ಗಪ್ಪನವರ ಯಲ್ಲಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಬೆಂಗಳೂರು ಅಕ್ಕಿಪೇಟೆಯಲ್ಲಿ ಇರುವ ಮರಿಯಪ್ಪನು, ಮೃತಪಟ್ಟ ಸದರೀ ದುರ್ಗಪ್ಪನವರ ಯಲ್ಲಪ್ಪನವರಿಗೆ ಭಾವಮೈದನು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಅಕ್ಕಿಪೇಟೆ ಸ್ಥಳದ ಮರಿಯಪ್ಪನು, ಬೆಂಗಳೂರು ಅಕ್ಕಿಪೇಟೇ ವಾಸಸ್ಥರಾಗಿ ಮೃತಪಟ್ಟ ದುರ್ಗಪ್ಪನವರ ಯಲ್ಲಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮರಿಯಪ್ಪನವರ ಅರ್ಜಿಯನ್ನು ಸ್ ೧೮೯೬ನೇ ಇಸವಿ ಸೆಪ್ಟಂಬರ್ ತಿಂಗಳ ತಾರೀಖು 5ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಯಲ್ಲಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬ನೇ ಇಸವಿ ಜುಲೈ ತಿಂಗಳ 29ನೇ ತಾರೀಖಿನಲ್ಲಿ ಕೋರ್ಟ್ ಮೊಹರ್‌ನಿಗೆ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಬೆಂಗಳೂರ್ ಡಿಸ್ಟ್ರಿಕ್ಟ್.

ಇಸ್ತಿಹಾರ್‌ನಾಮೆ.

ತಾರೀಖು 24ನೇ ಜುಲೈ 1896ನೇ ಇಸವಿ.

ಇದರಿಂದ ಸಮಸ್ತ ಜನರಿಗೂ ತಿಳಿಯಪಡಿಸುವದೇನಂದರೆ,—ಮೈನರ್ ಫಾರೆಸ್ಟ್ ಯಾನೆ ಚಿಲ್ಲರೆ ಪಸಾರೆ ಮತ್ತು ಮರವಳಿ ಫಸಲಿನ ಹರಾಜು ವಿಷಯದಲ್ಲಿ ಸಾದರ್ಹಾಡಲ್ಪಟ್ಟಿರುವ 1895ನೇ ಇಸವಿ ಜನವರಿ 31ನೇ ಮಕ್ಕಂ ಮೈಸೂರ್ ಗೆಜೆಟ್ಟಿನ 2ನೇ ಭಾಗವಲ್ಲಿ ಛಾಯಿಷಾಗಿರುವ ಅದೇ ಇಸವಿ ಜನವರಿ 23ನೇ ಮಕ್ಕಂ ಇಸ್ತಿಹಾರನ್ನು ಬದಲಾಯಿಸಿ ಅಮಲ್‌ದಾರ್ ಮತ್ತು ಸರ್ಕಲ್‌ದಾರ್‌ಗಳ ನಡವಳಿಕೆ ಬಗ್ಯೆ ಈ ಕೆಳಗೆ ನಮೂದಾಗುವ ತಾಜಾ ಇಸ್ತಿಹಾರ್ ಪ್ರಕಟಿಸಲ್ಪಟ್ಟಿರುತ್ತೆ.

(1) ಕಾರ್ತೀಕ ಮತ್ತು ವೈಶಾಖಿ ಫಸಲ್‌ಗಳು ಬೇರೆ ಬೇರೆ ಯರಡು ಕಾಲಗಳಲ್ಲಿ ಹರಾಜು ಮಾಡಲ್ಪಡುತ್ತವೆ.

(2) ತಾಲ್ಲೂಕು ಅಮಲ್ದಾರ್ರೇ ಆಗಲಿ ಅವರ ಗೈರಹಾಜರಿಯಲ್ಲಿ ಶಿರಸ್ತಾರ್ರೇ ಆಗಲಿ ಈ ಬಗ್ಗೆ ಡೆಪ್ಯುಟಿ ಕಮ್ಮಿಷನರವರಿಂದ ಗೊತ್ತುಮಾಡುವ ಸ್ಥಳಗಳಲ್ಲಿ ಫಸಲನ್ನು ಹರಾಜು ಮಾಡುವರು. ಕಾರ್ತೀಕ ಫಸಲನ್ನು ಡಿಸೆಂಬರ್ ತಿಂಗಳಲ್ಲಿಯೂ ವೈಶಾಖೀ ಫಸಲನ್ನು ಮೇ ತಿಂಗಳಲ್ಲಿಯೂ ಅನುಕೂಲವಾದ ತಾರೀಖುಗಳಲ್ಲಿ ಹರಾಜು ಮಾಡಲಾಗುವದು. ಆ ತಾರೀಖುಗಳನ್ನು ಅಮಲ್ದಾರು ಪ್ರಕಟಿಸುತ್ತಾರೆ. ಇನ್ನೊಂದು ಹುಕುಂ ಕೊಡುವವರಿಗೂ ಕ್ಲೋಸ್‌ಪೇಟೆ ಸಬ್ ಡಿವಿಜನಿನಲ್ಲಿ ಈ ಕೆಳಗೆ ನಮೂದುಮಾಡಿರುವ ಸ್ಥಳಗಳಲ್ಲಿ ಹರಾಜ್ ಮಾಡಿಸಲ್ಪಡುತ್ತೆ.

(3) ಹರಾಜು ಪರತ್ತುಗಳೇನಂದರೆ:—

(a) ಹರಾಜು ಪೂರೈಸಿದನಂತರ ಬರುವ ದರಖಾಸ್ತುಗಳನ್ನು ಮಂಜೂರ್ಮಾಡುವದಿಲ್ಲ.

(b) ಆಖೈರ್ ಚಡಸವಾಲ್ ಡೆಪ್ಯುಟಿ ಕಮ್ಮಿಷನರ್ ಸಾಹೆಬರವರಿಂದ ಮಂಜೂರಾಗುವ ವರಿಗೂ ಕಾಯಂ ಆದದ್ದಾಗಿ ತಿಳಿಯಕೂಡದು.

(c) ಹರಾಜು ಕಾಲದಲ್ಲಿ ಸವಾಲ್ ಮಾಡುವರು ತನ್ನ-ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಇತರರ ಏಜಂಟರಾಗಿ ಸವಾಲ್ ಮಾಡುತ್ತಾರೋ ಕೇಳಿಲ್ಪಡಬಹುದು. ಆ ಸಂದರ್ಭದಲ್ಲಿ ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಅವರಿಂದ ರುಜು ಹಾಕಲ್ಪಟ್ಟ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡಬೇಕು, ಹಾಗಿಲ್ಲವಾದರೆ ಅವರ ಸವಾಲ್ ತಿರಸ್ಕರಿಸಲ್ಪಡಬಹುದು.

(d) ಚಡಸವಾಲ್ದಾರನು ಹರಾಜು ಕಾಲದಲ್ಲಿ ತನ್ನ ಸವಾಲ್ ಅಂಗೀಕರಿಸಲ್ಪಟ್ಟ ಕೂಡ್ಲೆ ಸವಾಲ್ ಮೊಬಲಗು ಪೈಕಿ ಕೇಕಡಾ 25 ರೂಪಾಯಿಗಳ ಮೇರೆ ಡಿಪಾಜಿಟ್ಟನ್ನು ಹಾಜರ್ಮಾಡಬೇಕು. ಬಾಕಿ ಮೊಬಲಗನ್ನೂ ಮತ್ತು ರೂಪಾಯಿ 1ಕ್ಕೆ ಬಂದಾಣೆ ಮೇರಿಗೆ ಆಗುವ ಲೋಕಲ್ ಸೆಸ್ಸನ್ನೂ ಸಹ ಹರಾಜ್ ಕಾಯಂ ಆದ ಸಂಗತಿ ಬರಹ ಮೂಲಕ ಅಮಲ್ದಾರ್ರಿಂದ ತಿಳಿಸಲ್ಪಟ್ಟ 7 ದಿನಗಳೊಳಗಾಗಿ ಪಾವತಿ ಮಾಡಬೇಕು. ಡಿಪಾಜಿಟ್ಟನ್ನ ಕಟ್ಟುವದಕ್ಕೂ ಅಥವಾ ಬಾಕಿ ಪೊಬಲಗನ್ನು ಕ್ರಮವಾಗಿ ಪಾವತಿ ಮಾಡುವದಕ್ಕೂ ತಪ್ಪಿದರೆ ಕೂಡ್ಲೆ ಪುನಹ ಹರಾಜ್ ಮಾಡಿ ಅದರಿಂದ ಉಂಟಾಗುವ ನಷ್ಟಕ್ಕೆ ಮೊದಲು ಸವಾಲ್ದಾರನನ್ನು ಗುರಿಮಾಡುವದು.

(e) ಅಂಗೀಕರಿಸಲ್ಪಟ್ಟ ಸವಾಲ್ದಾರನು ವೈಶಾಖೀ ಫಸಲನ್ನು ಜೂ 1ನೇ ತಾರೀಖು ಲಾಗಾಯತು ಡಿಸೆಂಬರು 31ರ ವರಿಗೂ, ಕಾರ್ತೀಕ ಫಸಲನ್ನು ಜನವರಿ 1ನೇ ತಾರೀಖು ಲಾಗಾಯತು ಮೇ 31ರ ವರಿಗೂ ರೂಢಿಸಿಕೊಳ್ಳಲು ಹಕ್ಕುಳ್ಳವನಾಗಿರುತ್ತಾನೆ.

ತಾಲ್ಲೂಕು.	ತಾಲ್ಲೂಕಿನಲ್ಲಿ ಹರಾಜ್ ಮಾಡುವ ಸ್ಥಳ.
ಚನ್ನಪಟ್ಟಣ ..	ಪ್ರತಿ ಹೋಬಳಿ ಕಸಬೆಯಲ್ಲಿಯೂ ಆಯಾ ಹೋಬಳಿ ಬಾಬತು ಮರವಳಿ (ಜಂಗಲಿ ಪಸಾರೆ ಚನ್ನಪಟ್ಟಣದ ಕಸಬೆಯಲ್ಲಿ ಮಾತ್ರ ಹರಾಜ್‌ಮಾಡಲ್ಪಡುತ್ತೆ)
ಕಾರ್ಕಾನಹಳ್ಳಿ ..	ಪ್ರತಿ ಹೋಬಳಿ ಕಸಬೆಯಲ್ಲಿಯೂ ಆಯಾ ಹೋಬಳಿ ಬಾಬತು (ಮರವಳಿ ಮತ್ತು ಜಂಗ್ಲಿ ಪಸಾರೆ ಸಹ)
ಮಾಗಡಿ ..	ಮಾಗಡಿ ತಾವರೆಕೆರೆ, ಸೋಲೂರು, ಕುದೂರು ಮೊಕ್ಕಾಂಗಳಲ್ಲಿ (ಮರವಳಿ ಮತ್ತು ಜಂಗ್ಲಿ ಪಸಾರೆ ಸಹ)
ಕ್ಲೋಸ್‌ಪೇಟೆ ..	ಬಿಡದಿ ಮತ್ತು ಕ್ಲೋಸ್‌ಪೇಟೆಯಲ್ಲಿ (ಮರವಳಿ ಮತ್ತು ಜಂಗ್ಲಿ ಪಸಾರೆ ಸಹ)

ಬಿ. ಕುಪ್ಪಸಾಮಿನಾಯಡು,
ಫಾರ್ ಡೆಪ್ಯುಟಿ ಕಮ್ಮಿಷನರ್.

ಬೆಂಗಳೂರ್ ಸಿಟಿ ಮ್ಯುನಿಸಿಪಲ್ ಬೋರ್ಡು ಆಫಿಸಿನಿಂದ.

ಇಸ್ತಿಹಾರ್.

ಬೆಂಗಳೂರು ಸಿಟಿ ಮ್ಯುನಿಸಿಪಲ್ ಪ್ರಸೀಡೆಂಟರವರಲ್ಲಿಗೆ ಕೊಡುವ ಅರ್ಜಿಗಳಿಗೆ ಆಗುವ ಜವಾಬುಗಳನ್ನು ಸುಲಭವಾಗಿ ತಿಳಿದುಕೊಳ್ಳುವ ಬಗ್ಗೆ ಅರ್ಜಿದಾರ್‌ಗಳಿಗೆ ಯಿದರಿಂದ ತಿಳಿಯಪಡಿಸುವದೇನಂದರೆ:—

ಅರ್ಜಿಗಳು ಕೊಟ್ಟಬಳಿಕ 8 ದಿವಸಗಳ ವರವಿಗೂ ಜವಾಬ್ ತಲಪದೆ ಯಿದ್ದಲ್ಲಿ ಅರ್ಜಿದಾರ್‌ಗಳು ನಮ್ಮ ಆಫಿಸ್ ಮ್ಯಾನೇಜರರ ರೂಬರೂಬ್ ಹಾಜರಾಗಿ ಜವಾಬ್‌ಗಳನ್ನು ತೆಗದುಕೊಳ್ಳತಕ್ಕದ್ದು. ಒಂದು ವೇಳೆ ಅರ್ಜಿಗೆಳಿಗೆ ಜವಾಬ್ ಆಗದೆ ಇದ್ದಪಕ್ಷದಲ್ಲಿ ಅರ್ಜಿದಾರ್ರು ಆ ಸಂಗತಿಯನ್ನು ಕೂಡ್ಲೆ ಪ್ರಸೀಡೆಂಟರವರ ಬಳಿ ರೂಬರೂ ಹಾಜರಾಗಿ ತಿಳಿಯಪಡಿಸತಕ್ಕದ್ದು.

ಅರ್ಜಿಗಳು ಫೈನಲಾದ ತಾರೀಖು ತಿಳಿಸಲು ಒಂದು ಮಿಮೋ ತಯಾರ್ಮಾಡಿ ಮ್ಯುನಿಸಿಪಲ್ ಆಫಿಸಿನಲ್ಲಿ ಚಿಕಟಾಯಿಸಲ್ಪಡುವದು.

ತಾರೀಖು 18ನೇ ಮೇ 1896.

ಟಿ. ಟಿ. ಲೆನಾರ್ಡ್,
ಪ್ರೆಸಿಡೆಂಟ್.